# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೨೩೯೯೧, ೨೬೬೨೨೫೫೮೪ ಫ್ಯಾಕ್ಸ್ : ೨೬೫೨೨೫೮೬೭
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ: ಕಸಾಪ/ವ್ಯ.ವಿ./ಪ್ರಕಟಣೆ/೨೦೨೨–೨೩ ದಿನಾಂಕ: ೩೦-೧೧–೨೦೨೨

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**

...................................................
ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

## ೮೬ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗವಹಿಸುವವರ ಪ್ರತಿನಿಧಿ ನೋಂದಣಿ, ಪುಸ್ತಕ ಹಾಗೂ ವಾಣಿಜ್ಯ ಮಳಿಗೆಗಳ ನೋಂದಣಿಗೆ ಚಾಲನೆ

## -ನಾಡೋಜ ಡಾ. ಮಹೇಶ ಜೋಶಿ

ಬೆಂಗಳೂರು : ಹಾವೇರಿಯಲ್ಲಿ ೮೬ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹೆಸರಾಂತ ಹಿರಿಯ ಕವಿ ಡಾ. ದೊಡ್ಡರಂಗೇಗೌಡ ಅವರ ಅಧ್ಯಕ್ಷತೆಯಲ್ಲಿ ೨೦೨೩ರ ಜನವರಿ ೬ ಶುಕ್ರವಾರ, ೭ ಶನಿವಾರ ಹಾಗೂ ೮ ಭಾನುವಾರದಂದು ಮೂರು ದಿನಗಳ ಕಾಲ ನಡೆಸಲು ಪೂರ್ವಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದ್ದು, ಹುಬ್ಬಳ್ಳಿ-ಹಾವೇರಿ ಮುಖ್ಯರಸ್ತೆಯ ಆರ್.ಟಿ.ಓ. ಕಚೇರಿ ಸಮೀಪದ ಅಜ್ಜಯ್ಯನ ದೇವಸ್ಥಾನದ ಎದುರಿನ ಸ್ಥಳದಲ್ಲಿ ಸಮ್ಮೇಳನವನ್ನು ನಡೆಸಲು ಸಿದ್ಧತೆಗಳು ಭರದಿಂದ ಸಾಗುತ್ತಿವೆ. ಭಾವೈಕ್ಯತೆ, ಸಂಸ್ಕೃತಿ ಮತ್ತು ಪರಂಪರೆಗೆ ಹೆಸರುವಾಸಿಯಾದ ಹಾವೇರಿಯಲ್ಲಿ **"ಸಾಮರಸ್ಯದ ಭಾವ- ಕನ್ನಡದ ಜೀವ"** ಎಂಬ ಧ್ಯೇಯದೊಂದಿಗೆ ಜರುಗಲಿರುವ ಈ ಅಕ್ಷರಜಾತ್ರೆಯನ್ನು ಐತಿಹಾಸಿಕ ದಾಖಲೆಯಾಗಿ ಉಳಿಯುವಂತೆ ಮಾಡುವ ಉದ್ದೇಶವನ್ನು ಪರಿಷತ್ತು ಹೊಂದಿದ್ದು, ಈ ಸಮ್ಮೇಳನವನ್ನು ಕನ್ನಡಿಗರೆಲ್ಲರೂ ಸೇರಿ ಕನ್ನಡಿಗರ ಹಬ್ಬ ಎಂಬ ಭಾವನೆಯಿಂದ ಒಗ್ಗಟ್ಟಾಗಿ ಆಚರಿಸಬೇಕೆಂಬುದು ನಮ್ಮೆಲ್ಲರ ಆಶಯವಾಗಿದೆ ಎಂದು **ಕನ್ನಡ ಸಾಹಿತ್ಯ ಪರಿಷತ್ತಿ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಮ್ಮೇಳನದಲ್ಲಿ ಭಾಗವಹಿಸುವವರ ಪ್ರತಿನಿಧಿ ನೋಂದಣಿ, ಪುಸ್ತಕ ಹಾಗೂ ವಾಣಿಜ್ಯ ಮಳಿಗೆಗಳ ನೋಂದಣಿ, ಸಮ್ಮೇಳನದ ಆಮಂತ್ರಣ ಪತ್ರಿಕೆ, ವಿವಿಧ ಸಮಿತಿಗಳು ಮತ್ತು ಸಮಿತಿಯ ಸದಸ್ಯರ ವಿವರಗಳು, ಹಾವೇರಿ ಕುರಿತಂತೆ ಮಾಹಿತಿ, ಸಾರಿಗೆ, ಸಂಪರ್ಕ, ವಸತಿ ವಿವರ, ಸಹಾಯವಾಣಿ ಸೇರಿದಂತೆ ಸಮ್ಮೇಳನದ ಸಂಪೂರ್ಣ ಮಾಹಿತಿ, ವಿವರಗಳನ್ನು ಒದಗಿಸಲು ಅತ್ಯಾಧುನಿಕ ತಂತ್ರಜ್ಞಾನವುಳ್ಳ ಆಧುನಿಕ ಮೊಬೈಲ್ ಆ್ಯಪ್ ಅನ್ನು ಕನ್ನಡ ಸಾಹಿತ್ಯ ಪರಿಷತ್ತು ಸಿದ್ಧಪಡಿಸಿದೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಸಮ್ಮೇಳನದ ಪ್ರತಿನಿಧಿ ನೋಂದಣಿಗಾಗಿ**

ಈ ಅಕ್ಷರ ಜಾತ್ರೆಯಲ್ಲಿ ಭಾಗವಹಿಸಲು ಇಚ್ಛಿಸುವ ಅಭಿಮಾನಿಗಳು ಗೂಗಲ್ ಪ್ಲೇ ಸ್ಟೋರ್‌ನಲ್ಲಿ **"ಕನ್ನಡ ಸಾಹಿತ್ಯ ಸಮ್ಮೇಳನ ಹಾವೇರಿ"** ಆ್ಯಪ್ **https://play.google.com/store/apps/details?id=com.tritantra.kasapa** ಮೂಲಕ ಮಾತ್ರವೇ ರೂ. ೫೦೦/- (ಐದು ನೂರು ರೂಪಾಯಿ)ಗಳ ಶುಲ್ಕವನ್ನು ಆ್ಯಪ್ ಮೂಲಕವೇ ಪಾವತಿಸಿ ಪ್ರತಿನಿಧಿಯಾಗಿ ನೋಂದಾಯಿಸಿಕೊಳ್ಳಬಹುದಾಗಿದೆ. ವಿವರಗಳು ಈ ಕೆಳಕಡಂತಿದೆ.

ನೋಂದಣಿ ಪ್ರಕ್ರಿಯೆಗಳು :

೧) ಪ್ರತಿನಿಧಿಗಳಾಗಿ ಭಾಗವಹಿಸಲು ನೋಂದಾಯಿಸಲು ಇಚ್ಛಿಸುವವರು ಕಡ್ಡಾಯವಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವ ಹೊಂದಿರಬೇಕು. ಒಂದು ವೇಳೆ ಇನ್ನೂ ಪರಿಷತ್ತಿನ ಸದಸ್ಯರಾಗದಿದ್ದಲ್ಲಿ ಗೂಗಲ್ ಪ್ಲೇ ಸ್ಟೋರ್‌ನಲ್ಲಿ **https://bit.ly/kasapapp** ಆ್ಯಪ್ ಮೂಲಕ / ಆ್ಯಪಲ್ (ಐಓಎಸ್) ಸ್ಟೋರ್‌ನಲ್ಲಿ **https://apple.co/3zaw231** ಮೊದಲು ಸದಸ್ಯತ್ವ ಪಡೆದುಕೊಳ್ಳಬೇಕು. ಸದಸ್ಯತ್ವ ಪಡೆದ ತಕ್ಷಣವೇ ದೊರೆಯುವ ಸದಸ್ಯತ್ವ ಸಂಖ್ಯೆಯನ್ನು ಸಮ್ಮೇಳನದ ಆ್ಯಪ್‌ನಲ್ಲಿ **https://play.google.com/store/apps/details?id=com.tritantra.kasapa** ನಮೂದಿಸಿ ಸಮ್ಮೇಳನಕ್ಕೆ ಪ್ರತಿನಿಧಿಯಾಗಿ ನೋಂದಾಯಿಸಿಕೊಳ್ಳತಕ್ಕದ್ದು.

೨) ದಿನಾಂಕ ೦೧-೧೨-೨೦೨೨ ರ ಮಧ್ಯರಾತ್ರಿ ೧೨.೦೦ ರಿಂದ ನೋಂದಣಿ ಲಭ್ಯವಿದ್ದು, ದಿನಾಂಕ ೧೮-೧೨-೨೦೨೨ (ರಾತ್ರಿ ೧೨.೦೦ರ ವರೆಗೆ) ಅಂತಿಮ ದಿನವಾಗಿರುತ್ತದೆ.

೩) ಅವಧಿ ಮೀರಿ ಬರುವ ಕೋರಿಕೆಗಳಿಗೆ ಹಾಗೂ ಸಮ್ಮೇಳನ ನಡೆಯುವ ಸ್ಥಳದಲ್ಲಿ ಪ್ರತಿನಿಧಿಗಳ ನೋಂದಣಿಗೆ ಅವಕಾಶವಿರುವುದಿಲ್ಲ.

**ನೋಂದಾಯಿತ ಪ್ರತಿನಿಧಿಗಳಿಗೆ ಸಿಗುವ ಅನುಕೂಲತೆಗಳು / ಸೌಲಭ್ಯಗಳು** :

೧) ಹಾವೇರಿ ಜಿಲ್ಲೆಯಿಂದ ನೋಂದಾಯಿಸುವ ಪ್ರತಿನಿಧಿಗಳಿಗೆ ಹೊರತುಪಡಿಸಿ, ಮಿಕ್ಕುಳಿದ ಎಲ್ಲಾ ಜಿಲ್ಲೆಗಳ, ಹೊರ ರಾಜ್ಯಗಳ ನೋಂದಾಯಿತ ಪ್ರತಿನಿಧಿಗಳಿಗೆ ಲಭ್ಯವಿರುವ ವಸತಿ ಏರ್ಪಾಟುಗೊಳಿಸಲಾಗುವುದು.

೨) ವಸತಿ ಸ್ಥಳದಿಂದ ಸಮ್ಮೇಳನದ ಸ್ಥಳಕ್ಕೆ ಲಭ್ಯವಿರುವ ಸಾರಿಗೆ ವ್ಯವಸ್ಥೆ ಮಾಡಲಾಗುವುದು.

೩) ನೋಂದಾಯಿತ ಎಲ್ಲಾ ಪ್ರತಿನಿಧಿಗಳಿಗೆ ಊಟ/ಉಪಾಹಾರದ ವ್ಯವಸ್ಥೆ ಕೈಗೊಳ್ಳಲಾಗುವುದು.

೪) ಕಿಟ್ ಮತ್ತು ಬ್ಯಾಡ್ಜ್ ನೀಡಲಾಗುವುದು.

೫) ಓ.ಓ.ಡಿ. ಹಾಜರಾತಿ ಪ್ರಮಾಣ ಪತ್ರ ನೀಡಲಾಗುವುದು.

**ಪುಸ್ತಕ ಮಳಿಗೆಗಳ ನೋಂದಣಿಗಾಗಿ**

ಸಮ್ಮೇಳನದಲ್ಲಿ ಪುಸ್ತಕ ಮಳಿಗೆಗಳನ್ನು ತೆರೆಯಲು ಇಚ್ಛಿಸುವ ಪ್ರಕಾಶಕರು, ಮಾರಾಟಗಾರರು ಗೂಗಲ್ ಪ್ಲೇ ಸ್ಟೋರ್‌ನಲ್ಲಿ **"ಕನ್ನಡ ಸಾಹಿತ್ಯ ಸಮ್ಮೇಳನ ಹಾವೇರಿ"** ಆ್ಯಪ್ **https://play.google.com/store/apps/details?id=com.tritantra.kasapa** ಮೂಲಕ ಮಾತ್ರವೇ ಪುಸ್ತಕ ಮಳಿಗೆ ಒಂದಕ್ಕೆ ರೂ. ೩,೦೦೦/- (ಮೂರು ಸಾವಿರ ರೂಪಾಯಿ) ಶುಲ್ಕವನ್ನು ಆ್ಯಪ್ ಮೂಲಕವೇ ಪಾವತಿಸಿ ಮಳಿಗೆಗಳನ್ನು ತೆರೆಯಲು ನೋಂದಾಯಿಸಿಕೊಳ್ಳಬಹುದಾಗಿದೆ. ವಿವರಗಳು ಈ ಕೆಳಕಂಡAತಿದೆ.

**ನೋಂದಣಿ ಪ್ರಕ್ರಿಯೆಗಳು :**

೧) ಪುಸ್ತಕ ಮಳಿಗೆಗಳನ್ನು ತೆರೆಯಲು ಇಚ್ಛಿಸುವ ಲೇಖಕರು, ಪ್ರಕಾಶಕರು, ಮಾರಾಟಗಾರರು, ಪುಸ್ತಕ ಮಳಿಗೆಯ ಮುಖ್ಯಸ್ಥರು / ಮೇಲ್ವಿಚಾರಕರು ವೈಯಕ್ತಿಕವಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವವನ್ನು ಕಡ್ಡಾಯವಾಗಿ ಹೊಂದಿರಬೇಕು. ಒಂದು ವೇಳೆ ಇನ್ನೂ ಪರಿಷತ್ತಿನ ಸದಸ್ಯರಾಗದಿದ್ದಲ್ಲಿ ಗೂಗಲ್ ಪ್ಲೇ ಸ್ಟೋರ್‌ನಲ್ಲಿ **https://bit.ly/kasapapp** ಆ್ಯಪ್ ಮೂಲಕ / ಆ್ಯಪಲ್ (ಐಓಎಸ್) ಸ್ಟೋರ್‌ನಲ್ಲಿ **https://apple.co/3zaw231** ಮೊದಲು ಸದಸ್ಯತ್ವ ಪಡೆದುಕೊಳ್ಳಬೇಕು. ಸದಸ್ಯತ್ವ ಪಡೆದ ತಕ್ಷಣವೇ ದೊರೆಯುವ ಸದಸ್ಯತ್ವ ಸಂಖ್ಯೆಯನ್ನು ಸಮ್ಮೇಳನದ ಆ್ಯಪ್‌ನಲ್ಲಿ **https://play.google.com/store/apps/details?id=com.tritantra.kasapa** ನಮೂದಿಸಿ ಮಳಿಗೆಯನ್ನು ನೋಂದಾಯಿಸಿಕೊಳ್ಳತಕ್ಕದ್ದು.

೨) ದಿನಾಂಕ ೦೧-೧೨-೨೦೨೨ ರ ಮಧ್ಯರಾತ್ರಿ ೧೨.೦೦ ರಿಂದ ಮಳಿಗೆಗಳ ನೋಂದಣಿ ಲಭ್ಯವಿದ್ದು, ದಿನಾಂಕ ೧೮-೧೨-೨೦೨೨ (ರಾತ್ರಿ ೧೨.೦೦ರ ವರೆಗೆ) ಅಂತಿಮ ದಿನವಾಗಿರುತ್ತದೆ.

೩) ಮೂರು ದಿವಸಗಳಿಗೆ ಒಂದು ಹಾಗೂ ಒಂದಕ್ಕಿಂತ ಹೆಚ್ಚು ಪುಸ್ತಕ ಮಳಿಗೆ ಬೇಕಾದಲ್ಲಿ ತಲಾ ೩,೦೦೦/- (ಮೂರು ಸಾವಿರ ರೂಪಾಯಿ)ಗಳ ಬಾಡಿಗೆ ನೀಡುವುದು.

೪) ಕಡ್ಡಾಯವಾಗಿ ಕನ್ನಡ ಪುಸ್ತಕ ಮಾರಾಟಕ್ಕೆ ಮಾತ್ರ ಅವಕಾಶ. ಬೇರೆ ಭಾಷೆಗಳ ಪುಸ್ತಕ ಮಾರಾಟ ಕಂಡುಬಂದಲ್ಲಿ ಮಾರಾಟಕ್ಕೆ ನೀಡಲಾದ ಪರವಾನಗಿಯನ್ನು ರದ್ದುಪಡಿಸಲಾಗುವುದು.

೫) ಪ್ಲಾಸ್ಟಿಕ್ ಬಳಕೆ ಸಂಪೂರ್ಣ ನಿಷೇಧಿಸಲಾಗಿದೆ. ಒಂದು ವೇಳೆ ಪ್ಲಾಸ್ಟಿಕ್ ಬಳಕೆ ಕಂಡುಬAದಲ್ಲಿ ಪರವಾನಗಿಯನ್ನು ರದ್ದುಪಡಿಸಿ, ಮಳಿಗೆಯನ್ನು ತೆರವುಗೊಳಿಸಲಾಗುವುದು.

೬) ನೋಂದಣಿಯಲ್ಲಿ ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು.

೭) ಮಳಿಗೆಗಳ ಹಂಚಿಕೆಯನ್ನು ಜಿಲ್ಲಾಡಳಿತ ಮತ್ತು ಕನ್ನಡ ಸಾಹಿತ್ಯ ಪರಿಷತ್ತಿನ ಪ್ರತಿನಿಧಿಗಳ ಸಮ್ಮುಖದಲ್ಲಿ ಲಾಟರಿ ಆಧಾರದ ಮೇಲೆ ನಿರ್ಧರಿಸಲಾಗುವುದು ಮತ್ತು ಹಂಚಿಕೆಯ ದಾಖಲಾತಿ ಚಿತ್ರೀಕರಣ ಮಾಡಲಾಗುವುದು.

೮) ಮಳಿಗೆಗಳ ಹಂಚಿಕೆ ಆಗದಿದ್ದರೆ ಅವರ ಹಣವನ್ನು ಸಮ್ಮೇಳನದ ನಂತರ ೬೦ ದಿವಸಗಳಲ್ಲಿ ಮರಳಿಸಲಾಗುವುದು.

೯) ಅವಧಿ ಮೀರಿ ಬರುವ ಕೋರಿಕೆಗಳಿಗೆ ಹಾಗೂ ಸಮ್ಮೇಳನ ನಡೆಯುವ ಸ್ಥಳದಲ್ಲಿ ಮಳಿಗೆಗಳ ನೋಂದಣಿಗೆ ಅವಕಾಶವಿರುವುದಿಲ್ಲ.

**ನೋಂದಾಯಿತ ಪುಸ್ತಕ ಮಳಿಗೆಯಲ್ಲಿ ಸಿಗುವ ಅನುಕೂಲತೆಗಳು / ಸೌಲಭ್ಯಗಳು :**

೧) ಪ್ರತಿ ಮಳಿಗೆಗೆ ವಿದ್ಯುತ್ ಸೌಕರ್ಯ ಒದಗಿಸಲಾಗುವುದು.

೨) ಮಳಿಗೆಯೊಂದಕ್ಕೆ ೨ ಕುರ್ಚಿಗಳು, ೨ ಬೆಂಚುಗಳನ್ನು ಒದಗಿಸಲಾಗುವುದು.

೩) ಮಳಿಗೆಯೊಂದಕ್ಕೆ ನಾಲ್ವರಿಗೆ ಮಾತ್ರ ಊಟ/ಉಪಾಹಾರದ ವ್ಯವಸ್ಥೆಗೊಳಿಸಲಾಗುವುದು.

ಸೂಚನೆ : ಒಂದು ವೇಳೆ ಮಳಿಗೆಗಳಲ್ಲಿ ಒದಗಿಸಲಾಗಿದ್ದ ಸೌಲಭ್ಯಗಳು ಬೆಂಚು, ಕುರ್ಚಿ, ವಿದ್ಯುತ್ ದೀಪ - ಇವುಗಳನ್ನು ಹಾಳುಮಾಡಿದ್ದಲ್ಲಿ ಮಳಿಗೆದಾರರಿಂದಲೇ ದಂಡ ವಸೂಲಿ ಮಾಡಲಾಗುವುದು.

**ವಾಣಿಜ್ಯ ಮಳಿಗೆಗಳ ನೋಂದಣಿಗಾಗಿ**

ಸಮ್ಮೇಳನದಲ್ಲಿ ವಾಣಿಜ್ಯ ಮಳಿಗೆಗಳನ್ನು ತೆರೆಯಲು ಮಾರಾಟಗಾರರು ಗೂಗಲ್ ಪ್ಲೇ ಸ್ಟೋರ್‌ನಲ್ಲಿ "ಕನ್ನಡ ಸಾಹಿತ್ಯ ಸಮ್ಮೇಳನ ಹಾವೇರಿ" ಆ್ಯಪ್ **https://play.google.com/store/apps/details?id=com.tritantra.kasapa** ಮೂಲಕ ಮಾತ್ರವೇ ವಾಣಿಜ್ಯ ಮಳಿಗೆ ಒಂದಕ್ಕೆ ರೂ. ೫,೦೦೦/- (ಐದು ಸಾವಿರ ರೂಪಾಯಿ) ಶುಲ್ಕವನ್ನು ಆ್ಯಪ್ ಮೂಲಕವೇ ಪಾವತಿಸಿ ಮಳಿಗೆಗಳನ್ನು ತೆರೆಯಲು ನೋಂದಾಯಿಸಿಕೊಳ್ಳಬಹುದಾಗಿದೆ. ವಿವರಗಳು ಈ ಕೆಳಕಂಡAತಿದೆ.

**ನೋಂದಣಿ ಪ್ರಕ್ರಿಯೆಗಳು :**

೧) ವಾಣಿಜ್ಯ ಮಳಿಗೆಗಳನ್ನು ತೆರೆಯಲು ಇಚ್ಛಿಸುವ ಮಾರಾಟಗಾರರು, ಮುಖ್ಯಸ್ಥರು / ಮೇಲ್ವಿಚಾರಕರು ವೈಯಕ್ತಿಕವಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯತ್ವವನ್ನು ಕಡ್ಡಾಯವಾಗಿ ಹೊಂದಿರಬೇಕು. ಒಂದು ವೇಳೆ ಇನ್ನೂ ಪರಿಷತ್ತಿನ ಸದಸ್ಯರಾಗದಿದ್ದಲ್ಲಿ ಗೂಗಲ್ ಪ್ಲೇ ಸ್ಟೋರ್‌ನಲ್ಲಿ **https://bit.ly/kasapapp** ಆ್ಯಪ್ ಮೂಲಕ / ಆ್ಯಪಲ್ (ಐಓಎಸ್) ಸ್ಟೋರ್‌ನಲ್ಲಿ **https://apple.co/3zaw231** ಮೊದಲು ಸದಸ್ಯತ್ವ ಪಡೆದುಕೊಳ್ಳಬೇಕು. ಸದಸ್ಯತ್ವ ಪಡೆದ ತಕ್ಷಣವೇ ದೊರೆಯುವ ಸದಸ್ಯತ್ವ ಸಂಖ್ಯೆಯನ್ನು ಸಮ್ಮೇಳನದ ಆ್ಯಪ್‌ನಲ್ಲಿ **https://play.google.com/store/apps/details?id=com.tritantra.kasapa** ನಮೂದಿಸಿ ಮಳಿಗೆಯನ್ನು ನೋಂದಾಯಿಸಿಕೊಳ್ಳತಕ್ಕದ್ದು.

೨) ದಿನಾಂಕ ೦೧-೧೨-೨೦೨೨ ರ ಮಧ್ಯರಾತ್ರಿ ೧೨.೦೦ ರಿಂದ ಮಳಿಗೆಗಳ ನೋಂದಣಿ ಲಭ್ಯವಿದ್ದು, ದಿನಾಂಕ ೧೮-೧೨-೨೦೨೨ (ರಾತ್ರಿ ೧೨.೦೦ರ ವರೆಗೆ) ಅಂತಿಮ ದಿನವಾಗಿರುತ್ತದೆ.

೩) ಪ್ಲಾಸ್ಟಿಕ್ ಬಳಕೆ ಸಂಪೂರ್ಣ ನಿಷೇಧಿಸಲಾಗಿದೆ. ಒಂದು ವೇಳೆ ಪ್ಲಾಸ್ಟಿಕ್ ಬಳಕೆ ಕಂಡು ಬಂದಲ್ಲಿ ಪರವಾನಗಿಯನ್ನು ರದ್ದುಪಡಿಸಿ, ಮಳಿಗೆಯನ್ನು ತೆರವುಗೊಳಿಸಲಾಗುವುದು.

೪) ನೋಂದಣಿಯಲ್ಲಿ ಮೊದಲು ಬಂದವರಿಗೆ ಆದ್ಯತೆ ನೀಡಲಾಗುವುದು.

೫) ಮಳಿಗೆಗಳ ಹಂಚಿಕೆಯನ್ನು ಜಿಲ್ಲಾಡಳಿತ ಮತ್ತು ಕನ್ನಡ ಸಾಹಿತ್ಯ ಪರಿಷತ್ತಿನ ಪ್ರತಿನಿಧಿಗಳ ಸಮ್ಮುಖದಲ್ಲಿ ಲಾಟರಿ ಆಧಾರದ ಮೇಲೆ ನಿರ್ಧರಿಸಲಾಗುವುದು ಮತ್ತು ಹಂಚಿಕೆಯ ದಾಖಲಾತಿ ಚಿತ್ರಿಕರಣ ಮಾಡಲಾಗುವುದು.

೬) ಮಳಿಗೆಗಳ ಹಂಚಿಕೆ ಆಗದಿದ್ದರೆ ಅವರ ಹಣವನ್ನು ಸಮ್ಮೇಳನದ ನಂತರ ೬೦ ದಿವಸಗಳಲ್ಲಿ ಮರಳಿಸಲಾಗುವುದು.

೭) ಅವಧಿ ಮೀರಿ ಬರುವ ಕೋರಿಕೆಗಳಿಗೆ ಹಾಗೂ ಸಮ್ಮೇಳನ ನಡೆಯುವ ಸ್ಥಳದಲ್ಲಿ ಮಳಿಗೆಗಳ ನೋಂದಣಿಗೆ ಅವಕಾಶವಿರುವುದಿಲ್ಲ.

**ನೋಂದಾಯಿತ ವಾಣಿಜ್ಯ ಮಳಿಗೆಯಲ್ಲಿ ಸಿಗುವ ಅನುಕೂಲತೆಗಳು / ಸೌಲಭ್ಯಗಳು :**

೧) ಪ್ರತಿ ಮಳಿಗೆಗೆ ವಿದ್ಯುತ್ ಸೌಕರ್ಯ ಒದಗಿಸಲಾಗುವುದು.

೨) ಮಳಿಗೆಯೊಂದಕ್ಕೆ ೨ ಕುರ್ಚಿಗಳು, ೨ ಬೆಂಚುಗಳನ್ನು ಒದಗಿಸಲಾಗುವುದು.

೩) ಮಳಿಗೆಯೊಂದಕ್ಕೆ ನಾಲ್ವರಿಗೆ ಮಾತ್ರ ಊಟ/ಉಪಾಹಾರದ ವ್ಯವಸ್ಥೆಗೊಳಿಸಲಾಗುವುದು.

ಸೂಚನೆ : ಒಂದು ವೇಳೆ ಮಳಿಗೆಗಳಲ್ಲಿ ಒದಗಿಸಲಾಗಿದ್ದ ಸೌಲಭ್ಯಗಳು ಬೆಂಚು, ಕುರ್ಚಿ, ವಿದ್ಯುತ್ ದೀಪ - ಇವುಗಳನ್ನು ಹಾಳುಮಾಡಿದ್ದಲ್ಲಿ ಮಳಿಗೆದಾರರಿಂದಲೇ ದಂಡ ವಸೂಲಿ ಮಾಡಲಾಗುವುದು.

೮೬ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಪುಸ್ತಕ ಮಳಿಗೆ ಹಾಗೂ ವಸ್ತು ಪ್ರದರ್ಶನ ಸಮಿತಿಗೆ ಮಾಜಿ ಶಾಸಕರಾದ ಶ್ರೀ ಯು.ಬಿ. ಬಣಕಾರ ಅವರ ಅಧ್ಯಕ್ಷತೆಯಲ್ಲಿ ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಿ.ಎಂ. ಸಾಲಿ ಅವರ ಉಪಾಧ್ಯಕ್ಷತೆಯಲ್ಲಿ ಉಪ ಸಮಿತಿಯನ್ನು ರಚಿಸಲಾಗಿದೆ. ಪುಸ್ತಕ / ವಾಣಿಜ್ಯ ಮಳಿಗೆಯಲ್ಲಿನ ಸೌಲಭ್ಯದ ಬಗ್ಗೆ ಹೆಚ್ಚಿನ ಮಾಹಿತಿ ಕುರಿತು ಈ ಕೆಳಕಂಡವರನ್ನು ಸಂಪರ್ಕಿಲು ಕೋರಿದೆ.

೧) ಶ್ರೀ ವಿನಾಯಕ ಜೋಶಿ, ಜಂಟಿ ನಿರ್ದೇಶಕರು, ಕೈಗಾರಿಕಾ ಇಲಾಖೆ, ಹಾವೇರಿ. ಮೊ. ೮೬೬೦೩೪೮೫೦೫

೨) ಶ್ರೀ ಲಿಂಗಯ್ಯ ಹಿರೇಮಠ, ಅಧ್ಯಕ್ಷರು, ಹಾವೇರಿ ಜಿಲ್ಲಾ ಕ.ಸಾ.ಪ., ಮೊ. ೯೯೦೨೭೬೮೭೦೪

೩) ಶ್ರೀ ವೈ.ಬಿ. ಆಲದಕಟ್ಟಿ, ಅಧ್ಯಕ್ಷರು, ಹಾವೇರಿ ತಾಲ್ಲೂಕು ಕ.ಸಾ.ಪ., ಮೊ. ೯೮೮೦೨೬೮೨೬೫

೪) ಶ್ರೀ ಪಾರ್ಶ್ವನಾಥ್, ಕ.ಸಾ.ಪ., ಮೊ. ೯೯೦೧೦೫೯೮೮೮

೫) ಶ್ರೀ ಧನಂಜಯ, ಕ.ಸಾ.ಪ., ಮೊ. ೯೯೮೦೬೦೮೧೮೨

**ವಿಶೇಷ ಮನವಿ** :- ಸಮ್ಮೇಳನಕ್ಕೆ ರಾಜ್ಯದ ಮೂಲೆ ಮೂಲೆಯಿಂದ ಕನ್ನಡಾಭಿಮಾನಿಗಳು, ಸಾಹಿತ್ಯಾಸಕ್ತರು ಭಾಗವಹಿಸುವುದರಿಂದ ಹಾಗೂ ಪುಸ್ತಕ ಮಾರಾಟವು ಸಮ್ಮೇಳನದ ಪ್ರಮುಖ ಆಕರ್ಷಣೆಯಾಗಿರುವುದರಿಂದ ನಾಡಿನಾದ್ಯಂತ ಈ ಸುದ್ದಿ ಪ್ರಸಾರವಾಗುವಂತೆ "ರಾಜ್ಯಮಟ್ಟದ ಸುದ್ದಿ"ಯಲ್ಲಿ ಪ್ರಕಟಿಸುವಂತೆ ತಮ್ಮನ್ನು ಕೋರಲಾಗಿದೆ.

ಶ್ರೀನಾಥ್ ಜೆ.
ಮಾಧ್ಯಮ ಸಲಹೆಗಾರರು
ಕನ್ನಡ ಸಾಹಿತ್ಯ ಪರಿಷತ್ತು ಬೆಂಗಳೂರು